ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಶುಕ್ರವಾರ, ದಿನಾಂಕ: ೨೫ನೇ ಜುಲೈ ೨೦೧೪**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಖಾಸಗಿ ಶಾಲಾ ಕಾಲೇಜುಗಳಲ್ಲಿ ದುಬಾರಿ ಶುಲ್ಕ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೧ (೨೦೬೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಖಾಸಗಿ ಶಾಲಾ ಕಾಲೇಜುಗಳಿವೆ ;

(ಆ) ಖಾಸಗಿ ಶಾಲಾ ಕಾಲೇಜುಗಳಲ್ಲಿ ದುಬಾರಿ ಶುಲ್ಕವನ್ನು ವಿದ್ಯಾರ್ಥಿಗಳಿಂದ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ದುಬಾರಿ ಶುಲ್ಕವನ್ನು ತಡೆಯಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ?

## ಪೊಲೀಸ್ ಕಾಲೋನಿಯ ಕಾಲೇಜು ಕಟ್ಟಡ ನಿರ್ಮಾಣ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**೩೬೨** (೧೯೮೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಪೊಲೀಸ್ ಕಾಲೋನಿಯ ಸರ್ಕಾರಿ ಪದವಿ ಕಾಲೇಜು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು ; ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಪ್ರೌಢ ಶಾಲೆ ಮತ್ತು ಕಾಲೇಜು ಒಂದೇ ಕಟ್ಟಡದಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕಾಲೇಜು ಕಟ್ಟಡ ನಿರ್ಮಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಈ ಕಟ್ಟಡ ನಿರ್ಮಿಸಲು ಸರ್ಕಾರದಲ್ಲಿ ಹಣದ ಕೊರತೆ ಅಥವಾ ಬೇರೆ ಇನ್ನೇನಾದರೂ ಕಾರಣಗಳು ಇದೆಯೇ ? (ಪೂರ್ಣ ವಿವರ ನೀಡುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಆಯ್ಕೆ ಪ್ರಕ್ರಿಯೆ ಮತ್ತು ಕರ್ತವ್ಯ ನಿರ್ವಹಣೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

**೩೬೩** (೨೦೫೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೆಷ್ಟು ; ಇವರಲ್ಲಿ ನೇರ ನೇಮಕಾತಿಯಲ್ಲಿ ಆಯ್ಕೆಯಾದ ಪಂಚಾಯಿತಿ ಆಭಿವೃದ್ಧಿ ಅಧಿಕಾರಿಗಳೆಷ್ಟು ; ಪದೋನ್ನತಿ ಹೊಂದಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ತಿಳಿಸುವುದು (ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ) ಹಾಗೂ ಇನ್ನು ಎಷ್ಟು ಪಂಚಾಯಿತಿಗಳು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಲ್ಲದೇ ಖಾಲಿಯಿವೆ ; ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು) ಖಾಲಿಯಿದ್ದಲ್ಲಿ, ನೇಮಕ ಮಾಡಲಾಗುವುದೇ ;

(ಆ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೇಗೆ ತರಬೇತಿ ನೀಡಲಾಗುತ್ತದೆ ; ತರಬೇತಿ ವಿವರ ನೀಡುವುದು ; ಎಷ್ಟು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರನ್ನು ಬೇರೆ ರಾಜ್ಯಗಳಿಗೆ ತರಬೇತಿಗೆ ಕಳುಹಿಸಲಾಗುತ್ತದೆ ; ಇದಕ್ಕೆ ಸರ್ಕಾರಕ್ಕೆ ತಗುಲುವ ವೆಚ್ಚವೆಷ್ಟು ; ಎಷ್ಟು ದಿನ ತರಬೇತಿಗಾಗಿ ಕಳುಹಿಸಲಾಗುತ್ತಿದೆ ;

(ಇ) ಈ ತರಬೇತಿಯಿಂದ ಪ್ರಯೋಜನವಾಗುತ್ತಿದೆಯೇ ; ಇತರೆ ರಾಜ್ಯಗಳಲ್ಲಿರುವಂತೆ ಅಭಿವೃದ್ಧಿ ಕಾರ್ಯ ಮಾಡಲು ಸ್ಥಳೀಯ ಮುಖಂಡರಿಂದ ವಿರೋಧ ವ್ಯಕ್ತವಾಗುತ್ತಿದೆ ಎನ್ನುವುದು ನಿಜವೇ ; ಹಾಗೂ ಈ ಅಧಿಕಾರಿಗಳ ಮೇಲೆ ಅತಿಯಾದ ಒತ್ತಡವಿದ್ದು, ನಿಷ್ಠೆಯಿಂದ ಕೆಲಸ ಮಾಡುವುದು ಕಷ್ಟ ಸಾಧ್ಯವಾಗಿದೆ ಎಂಬುದಕ್ಕೆ ಸರ್ಕಾರದ ನಿಲುವೇನು ; ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗ್ರಾಮ ಪಂಚಾಯಿತಿಗೆ ವರ್ಷಕ್ಕೆ ನೀಡುವ ಅನುದಾನವೆಷ್ಟು ; ಈ ಅನುದಾನದಲ್ಲಿ ಯಾವ್ಯಾವ ಅಭಿವೃದ್ಧಿ ಕಾರ್ಯ ಮತ್ತು ವೆಚ್ಚ ಮಾಡಲು ಅವಕಾಶವಿದೆ ; ದೊರೆಯುವ ಅನುದಾನ ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ ; ಬಳಕೆಯಾದ ಅನುದಾನದ ವಿವರ ಜಿಲ್ಲಾವಾರು ನೀಡುವುದು ; (೨೦೧೨ನೇ ಸಾಲಿನಿಂದ ಇಲ್ಲಿಯವರೆಗೆ)

(ಉ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಆಯ್ಕೆ ಪ್ರಕ್ರಿಯೆಯಲ್ಲಿ ಜಿಲ್ಲಾವಾರು ಆಯ್ಕೆ ಮಾಡುವುದರಿಂದ ಬೇರೆ ಬೇರೆ ಜಿಲ್ಲೆಗೆ ಆಯ್ಕೆಯಾಗಿ ಅವರ ಸಂಸಾರ ಬೇರೊಂದು ಜಿಲ್ಲೆಯಲ್ಲಿರುವುದರಿಂದ ಹೆಚ್ಚಿನ ಕಾರ್ಯ ನಿರ್ವಹಿಸುವುದು ಕಷ್ಟ ಸಾಧ್ಯವಾದ್ದರಿಂದ ಖಾಲಿಯಿರುವಂತಹ ಅವರವರ ಜಿಲ್ಲೆಗೆ ಅವರು ಬಯಸಿದಾಗ ವರ್ಗಾವಣೆ ಮಾಡಬಹುದಾಗಿದ್ದು, ಇದಕ್ಕೆ ಸರ್ಕಾರದ ಮಾನದಂಡವೇನು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಮತ್ತು ಪ್ರಾಧ್ಯಾಪಕರು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೩೬೪ (೨೦೧೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು, ಪ್ರಾಧ್ಯಾಪಕರ ಸಂಖ್ಯಾ ವಿವರಗಳನ್ನು ವಿಷಯವಾರು, ಪ್ರಾದೇಶಿಕವಾರು ಒದಗಿಸುವುದು ;

(ಆ) ಈ ಕಾಲೇಜುಗಳಲ್ಲಿ ಅಧ್ಯಾಪಕರ ಹಾಗೂ ಪ್ರಾಂಶುಪಾಲರ ಕೊರತೆ ಉಂಟಾಗಿರುವುದು ಕಂಡು ಬಂದಿದೆಯೇ ; ಹಾಗಿದ್ದಲ್ಲಿ, ಎಲ್ಲೆಲ್ಲಿ ಖಾಲಿ ಇರುವಂತಹ ಪ್ರಾಂಶುಪಾಲರ, ಅಧ್ಯಾಪಕರ ಹುದ್ದೆಗಳ ವಿವರಗಳನ್ನು ವಿಷಯವಾರು, ಜಿಲ್ಲಾವಾರು ವಿವರ ಒದಗಿಸುವುದು ;

(ಇ) ಹೊಸದಾಗಿ ಈ ಶೈಕ್ಷಣಿಕ ಸಾಲಿನಿಂದ ಹೊಸ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆಯೇ ; ಹಾಗಿದ್ದಲ್ಲಿ, ಎಲ್ಲೆಲ್ಲಿ ; (ಜಿಲ್ಲಾವಾರು ಮಾಹಿತಿಯೊಂದಿಗೆ) ಸದರಿ ಕಾಲೇಜುಗಳ ಅಧ್ಯಾಪಕ, ಪ್ರಾಂಶುಪಾಲರ ಬೇಡಿಕೆಗೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ;

(ಈ) ಖಾಲಿ ಇರುವಂತಹ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ನೇಮಕಾತಿಗೆ ಇರುವ ತೊಂದರೆಗಳೇನು ; ಯಾವಾಗ ಭರ್ತಿ ಮಾಡಿಕೊಳ್ಳಲಾಗುತ್ತದೆ ; ನೇಮಕಾತಿ ಪ್ರಕ್ರಿಯೆಯ ಮಾರ್ಗಸೂಚಿ ಮಾನದಂಡಗಳೇನು ;

(ಉ) ಪ್ರಾಂಶುಪಾಲರ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಸರ್ಕಾರ ಮುಂದಾಗುವುದೇ ; ಇದಕ್ಕೇನಾದರೂ ಅಧ್ಯಾಪಕರುಗಳ ವಿರೋಧ ವ್ಯಕ್ತವಾಗಿದೆಯೇ ; ಇದಕ್ಕೆ ಕಾರಣಗಳೇನು ?

## ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ರನ್‌ವೇ

**ಶ್ರೀ ಐವಾನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೬೫ (೧೯೮೭) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಗೆ ವಿಮಾನ ನಿಲ್ದಾಣ ಪ್ರಾಧಿಕಾರ ಕೇಳಿಕೊಂಡ ಹೆಚ್ಚುವರಿ ಜಾಗವೆಷ್ಟು ; ಅದನ್ನು ಒದಗಿಸಿಕೊಡಲಾಗಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ;

(ಆ) ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಗಮನದ ರಸ್ತೆಯ ಬಗ್ಗೆ ಕಾಮಗಾರಿಯು ಯಾವಾಗ ಪ್ರಾರಂಭಗೊಂಡಿದ್ದು, ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರನ್‌ವೇ ನಿರ್ಮಾಣ ಮಾಡದೇ ಹೆಚ್ಚುವರಿ ವಿಮಾನಗಳ ಹಾರಾಟಕ್ಕೆ ತೊಂದರೆ ಉಂಟಾಗಿದೆಯೇ ; ಪ್ರಸ್ತುತ ಎಲ್ಲಾ ಅಂತರರಾಷ್ಟ್ರೀಯ ವಿಮಾನಗಳು ಮಂಗಳೂರಿನಿಂದ ವಿವಿಧ ರಾಷ್ಟ್ರಗಳಿಗೆ ಹಾರಾಟವನ್ನು ನಡೆಸುತ್ತಿದೆಯೇ ? (ವಿವರ ನೀಡುವುದು)

## ಕಲಾವಿದರುಗಳಿಗೆ ಸಹಾಯಧನ

**ಡಾ॥ ಜೈಮಾಲಾ ರಾಮಚಂದ್ರ** (ನಾಮನಿರ್ದೇಶನ **ಹೊಂದಿದವರು**) –

೩೬೬ (೨೦೨೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲಾ ಸಹಾಯಕ ನಿರ್ದೇಶಕರಿಗೆ ಒದಗಿಸಲಾಗಿರುವ ಅನುದಾನದಲ್ಲಿ ಸ್ಥಳೀಯ ಕಲಾವಿದರುಗಳಿಗೆ ಅವಕಾಶ ಕಲ್ಪಿಸುವ ಮೂಲಕ ಕಳೆದ ೦೩ ವರ್ಷಗಳಿಂದ ಎಷ್ಟು ಸಹಾಯಧನ ನೀಡಲಾಗಿದೆ ;

(ಆ) ಕಳೆದ ೦೩ ವರ್ಷಗಳಿಂದ ಎಷ್ಟು ಕಲಾವಿದರುಗಳಿಗೆ ಈ ಸಹಾಯಧನವನ್ನು ನೀಡಲಾಗಿದೆ ; ಇನ್ನೂ ಹೆಚ್ಚು ಹೆಚ್ಚು ಕಲಾವಿದರುಗಳನ್ನು ಗುರುತಿಸಿ ಅವರ ಅಭಿವೃದ್ಧಿಗೆ ಸಹಾಯಧನವನ್ನು ನೀಡಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಅಂಗನವಾಡಿ ಕೇಂದ್ರಗಳಿಗೆ ಮೊಟ್ಟೆ ವಿತರಣೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ** (**ವಿಧಾನಸಭೆಯಿಂದ ಚುನಾಯಿತರಾದವರು**) –

೩೬೭ (೧೯೯೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೨ ರಿಂದ ೨೦೧೫ನೇ ಜೂನ್ ತಿಂಗಳವರೆಗೆ ಅಂಗನವಾಡಿ ಕೇಂದ್ರಗಳಿಗೆ ಮೊಟ್ಟೆ ವಿತರಿಸುತ್ತಿರುವ ಯೋಜನೆ ಯಾವಾಗ ಜಾರಿಗೆ ಬಂದಿದೆ ;

(ಆ) ಹಾಗಿದ್ದಲ್ಲಿ, ವಾರದಲ್ಲಿ ಎಷ್ಟು ದಿನಗಳಿಗೊಮ್ಮೆ ಮೊಟ್ಟೆ ನೀಡಲಾಗುತ್ತಿದೆ ; ಹಾಗೂ ಈ ಯೋಜನೆಗೆ ಪ್ರತಿ ತಿಂಗಳು ಮೊಟ್ಟೆಗಾಗಿ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಅಂಗನವಾಡಿ ಕೇಂದ್ರಗಳಿಗೆ ಯಾವ ಯಾವ ಸಂಸ್ಥೆಗಳ ಮುಖಾಂತರ ಮೊಟ್ಟೆ ಸರಬರಾಜು ಮಾಡಲಾಗುತ್ತಿದೆ ; ಹಾಗೂ ಆ ಸಂಸ್ಥೆಗಳ/ಗುತ್ತಿಗೆದಾರರ ಹೆಸರು ವಿವರ ನೀಡುವುದು ;

(ಈ) ಯಾವ ಯಾವ ಅಂಗನವಾಡಿ ಕೇಂದ್ರಗಳಿಗೆ ಎಷ್ಟು ಪ್ರಮಾಣದ ಮೊಟ್ಟೆ ವಿತರಿಸಲಾಗುತ್ತಿದೆ ? (ಸಂಪೂರ್ಣ ತಾಲ್ಲೂಕುವಾರು ಮಾಹಿತಿ ನೀಡುವುದು)

**ಇಂಗ್ಲೀಷ್ ಮಾಧ್ಯಮ ಶಾಲೆಗಳು ಹಾಗೂ ಮಾತೃ ಭಾಷೆಯಲ್ಲಿ ಶಿಕ್ಷಣ**

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

**೩೬೮** (೨೦೦೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಜಾಪುರ, ಬೆಳಗಾವಿ ಮತ್ತು ಬಾಲಕೋಟೆ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ನಡೆಯುತ್ತಿರುವ ಇಂಗ್ಲೀಷ್ ಮಾಧ್ಯಮ (ರಾಜ್ಯ ಪಠ್ಯ ಕ್ರಮ) ಶಾಲೆಗಳು ಎಷ್ಟು ; (ಅವುಗಳ ಹೆಸರು, ವಿಳಾಸ, ಜಿಲ್ಲಾವಾರು ವಿವರ ನೀಡುವುದು)

ಅ) ಈ ಶಾಲೆಗಳ ಶುಲ್ಕ ಸಂರಚನೆ, ಪ್ರವೇಶ ನೀತಿಯೇನು ;

ಆ) ಬೆಳಗಾವಿ ಮಹಾನಗರದಲ್ಲಿ ಯಾವ ಯಾವ ಶಾಲೆಗಳು ಯಾವ ಯಾವ ಮಾನದಂಡದ ಮೂಲಕ ಪ್ರವೇಶ ಪ್ರಕ್ರಿಯೆ ನಡೆಸುತ್ತಿವೆ ;

ಇ) ಈ ಶಾಲೆಗಳ ಪೈಕಿ ಯಾವ ಶಾಲೆಗಳ ಮೇಲೆ ದಾಖಲಾತಿ ಪ್ರಕ್ರಿಯೆಯಲ್ಲಿ ಶೋಷಣೆ ಮಾಡಿದ ಆರೋಪ, ದೂರು ಬಂದಿವೆ ;

(ಆ) ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಭಾಷಾ ಅಲ್ಪಸಂಖ್ಯಾತ ಶಾಲಾ ಕಾಲೇಜುಗಳ ಅಭಿವೃದ್ಧಿಗೆ ತೆಗೆದುಕೊಂಡ ಕ್ರಮವೇನು ;

ಅ) ಆ ಶಾಲೆಗಳಲ್ಲಿ ಓದುವ ಮಕ್ಕಳಿಗೆ ಯಾವ ಯಾವ ಯೋಜನೆಯನ್ನು ಸರ್ಕಾರ ನೀಡುತ್ತಿದೆ ;

(ಇ) ಭಾಷಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರ ಒದಗಿಸಿರುವ ಸೌಲಭ್ಯಗಳು ಹಾಗೂ ರಿಯಾಯಿತಿ, ವಿನಾಯಿತಿಗಳೇನು ;

ಅ) ಭಾಷಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳ ವಿಭಾಗಗಳಲ್ಲಿ ಇರಬೇಕಾದ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

ಆ) ಮಹಾರಾಷ್ಟ್ರದ ಮಾದರಿಯಲ್ಲಿ ಭಾಷಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯೆಂದು ಸ್ಥಾನಮಾನ ಪಡೆದರೆ, ಅದರಡಿ ಆರಂಭಿಸಿರುವ ಶಾಲಾ ಕಾಲೇಜುಗಳು ಪ್ರತ್ಯೇಕವಾಗಿ ಪಡೆಯಬೇಕಾದ ಅಗತ್ಯ ಇಲ್ಲ ಎನ್ನುವ ನಿಯಮವನ್ನು ಜಾರಿಗೆ ತರಬಾರದೇ ;

(ಈ) ಮಾತೃ ಭಾಷೆಯಲ್ಲಿ ಶಿಕ್ಷಣ ನೀಡುವ ಕುರಿತು ಸರ್ಕಾರದ ನಿಲುವೇನು ;

ಅ) ಈ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪೇನು ;

ಆ) ತೀರ್ಪಿಗೆ ಸಂಬಂಧಿಸಿದಂತೆ ಸರ್ಕಾರದ ಮುಂದಿನ ಕ್ರಮವೇನು ;

(ಉ) ಬಿಜಾಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆಗಳ ಸ್ಥಿತಿಗತಿ ಕುರಿತು ಕೆ.ಎಸ್.ಕ್ಯೂ.ಎ.ಎ.ಸಿ. ತನ್ನ ವರದಿ ನೀಡಿದೆಯೇ ;

ಅ) ಈ ಶೈಕ್ಷಣಿಕ ಜಿಲ್ಲೆಗಳು ಎಷ್ಟನೇ ಸ್ಥಾನದಲ್ಲಿವೆ ;

ಆ) ಯಾವ ಯಾವ ಮಾನದಂಡ ಇಟ್ಟುಕೊಂಡು ಕ್ರಮಾಂಕಗಳನ್ನು ನೀಡಲಾಗಿದೆ?

## ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕಂಪ್ಯೂಟರ್ ಶಿಕ್ಷಣ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೩೬೯ (೧೯೯೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಂಪ್ಯೂಟರ್ ಶಿಕ್ಷಣ ಐಸಿಟಿ ಫೇಸ್–೨ ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಈ ಯೋಜನೆಯಡಿ ರಾಜ್ಯಾದ್ಯಂತ ಎಷ್ಟು ಕಾಲೇಜುಗಳು ಕಂಪ್ಯೂಟರ್ ಶಿಕ್ಷಣ ನೀಡುತ್ತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಈ ಯೋಜನೆಯಡಿ ಎಷ್ಟು ಕಂಪ್ಯೂಟರ್ ಸರಬರಾಜು ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಂಪ್ಯೂಟರ್ ಶಿಕ್ಷಕರು ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆಯೇ ; ಗುತ್ತಿಗೆದಾರರ ವಿವರ ನೀಡುವುದು ; ಸದರಿ ಗುತ್ತಿಗೆದಾರರು ಕಂಪ್ಯೂಟರ್ ಶಿಕ್ಷಕರಿಗೆ ಕಾಲ ಕಾಲಕ್ಕೆ ನೀಡಬೇಕಾದ ಸಂಬಳ, ಭತ್ಯೆ ಮುಂತಾದವನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಶಿಕ್ಷಕರ ಸಂಬಳ ಬಾಕಿ ಉಳಿಸಿಕೊಂಡಿರುವ ವಿವಿಧ ಗುತ್ತಿಗೆದಾರರ ವಿವರ ನೀಡುವುದು ; ಈ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ?

## ಪ್ರಥಮ ದರ್ಜೆ ಕಾಲೇಜು ಹಾಗೂ ಮಹಿಳಾ ಕಾಲೇಜು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೦ (೨೦೦೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರಥಮ ದರ್ಜೆ ಮತ್ತು ಮಹಿಳಾ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕಾಲೇಜುಗಳಿಗೆಲ್ಲ ಸ್ವಂತ ಕಟ್ಟಡಗಳಿವೆಯೇ ; ಇಲ್ಲವಾದಲ್ಲಿ, ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳೆಷ್ಟು ; ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ತಾಲ್ಲೂಕುವಾರು, ವಿಷಯವಾರು ಹುದ್ದೆಗಳ ವಿವರ ನೀಡುವುದು)

**ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ**
**ಜೇಷ್ಠತಾ ಪಟ್ಟಿ : ಪದೋನ್ನತಿ ನೀಡಿಕೆ**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೩೭೧ (೨೦೩೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ಬಂದಿರುವ/ನಿಯೋಜನೆಗೊಂಡಿರುವ ಕಾರ್ಯದರ್ಶಿ, ಕಾರ್ಯ ನಿರ್ವಾಹಕ ಅಧಿಕಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉಪ ಕಾರ್ಯದರ್ಶಿ, ಅಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಅಧಿಕಾರಿವಾರು, ಹುದ್ದೆವಾರು ಪೂರ್ಣ ವಿವರ ನೀಡುವುದು)

(ಆ) ಅನ್ಯ ಇಲಾಖೆಯಿಂದ ಬಂದು ಪಂಚಾಯತ್ ರಾಜ್ ಇಲಾಖೆಯಲ್ಲಿ ವಿಲೀನವಾದವರ ಸಂಖ್ಯೆ ಎಷ್ಟು ; (ಹುದ್ದೆವಾರು, ಇಲಾಖಾವಾರು ಪೂರ್ಣ ವಿವರ ನೀಡುವುದು)

(ಇ) ರಾಜ್ಯ ಮಟ್ಟದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿ ಯಾವ ದಿನಾಂಕದಂದು ತಯಾರಾಗಿದೆ ;

(ಈ) ಜೇಷ್ಠತಾ ಪಟ್ಟಿ ತಯಾರಾಗುವ ಮೊದಲೇ ಎಷ್ಟು ಜನರಿಗೆ ಪಂಚಾಯಿತಿ ಅಭಿವೃದ್ಧಿ ಹುದ್ದೆಯಿಂದ ಸಹಾಯಕ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡಲಾಗಿದೆ ; (ಹುದ್ದೆವಾರು, ದಿನಾಂಕದ ಪೂರ್ಣ ವಿವರ ನೀಡುವುದು)

(ಉ) ಸದರಿ ಸಹಾಯಕ ನಿರ್ದೇಶಕರ ಹುದ್ದೆಯಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಯಾವಾಗ ಪದೋನ್ನತಿ ನೀಡಲಾಗಿದೆ ;

(ಊ) ಇವರಿಗೆ ಎಷ್ಟು ಪದೋನ್ನತಿ ಹುದ್ದೆಯನ್ನು ನೀಡಲಾಗಿದೆ ;

(ಋ) ಇದರಲ್ಲಿ ಬಿಲ್ ಕಲೆಕ್ಟರ್ ಹುದ್ದೆಯಿಂದ ಬಂದವರೆಷ್ಟು ? (ಪೂರ್ಣ ವಿವರ ನೀಡುವುದು)

## ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಸ್ನಾತಕೋತ್ತರ ಹಾಗೂ ಪಿ.ಎಚ್‌ಡಿ ಕೋರ್ಸ್ ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** (ಪದವೀಧರರ ಕ್ಷೇತ್ರ) –

೩೭೨ (೨೦೦೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ಪಟ್ಟಣದಲ್ಲಿ ಪದವಿ ಕಾಲೇಜುಗಳು ಇದ್ದರೂ ಕೂಡ ಪಿ.ಎಚ್‌ಡಿ ಕೋರ್ಸ್ ಹಾಗೂ ಸ್ನಾತಕೋತ್ತರ ಕೋರ್ಸ್ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕೋರ್ಸುಗಳನ್ನು ಪ್ರಾರಂಭಿಸುವ ವಿಚಾರ ಯಾವ ಹಂತದಲ್ಲಿದೆ ;

(ಇ) ಕೂಡಲೇ ಸದರಿ ಕಾಲೇಜಿನ ಪ್ರಿನ್ಸಿಪಾಲರಿಗೆ ಪ್ರಸ್ತಾವನೆಯನ್ನು ಬಿಜಾಪುರದ ಮಹಿಳಾ ವಿಶ್ವವಿದ್ಯಾಲಯಕ್ಕೆ ಕಳುಹಿಸಲು ಆದೇಶ ನೀಡಲಾಗುವುದೇ ;

(ಈ) ಈ ಕಾಲೇಜಿನಲ್ಲಿ ಯಾವ–ಯಾವ ಮೂಲಭೂತ ಸೌಕರ್ಯಗಳ ಕೊರತೆ ಇದೆ ಹಾಗೂ ಅದನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಇಲ್ಲಿನ ವಿದ್ಯಾರ್ಥಿನಿಯರು ಬೇರೆ ಕಡೆಗೆ ಹೋಗಿ ಕಲಿಯುತ್ತಿರುವುದರಿಂದ ಅವರ ತೊಂದರೆ ಹೋಗಲಾಡಿಸಲು ಇಲ್ಲಿ ಅಗತ್ಯ ಮೂಲಭೂತ ಸೌಕರ್ಯ ಒದಗಿಸಿ, ಪಿ.ಎಚ್‌ಡಿ ಕೋರ್ಸ್ ಹಾಗೂ ಸ್ನಾತಕೋತ್ತರ ಕೋರ್ಸ್ ಪ್ರಾರಂಭಿಸಲಾಗುವುದೇ ?

## ಆರ್.ಟಿ.ಇ. ಅಡಿಯಲ್ಲಿ ದಾಖಲಾದ ಮಕ್ಕಳು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ ) –**

೩೭೩ (೨೦೨೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಆರ್.ಟಿ.ಇ. ಅಡಿಯಲ್ಲಿ ಶಾಲೆಗಳಿಗೆ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಸದರಿ ಮಕ್ಕಳಿಗೆ ಸರ್ಕಾರ ಭರಿಸುತ್ತಿರುವ ಮೊತ್ತ ಎಷ್ಟು ; (ಶಾಲಾವಾರು ಮಾಹಿತಿ ನೀಡುವುದು)

(ಆ) ಆರ್.ಟಿ.ಇ. ಅಡಿಯಲ್ಲಿ ದಾಖಲಾದ ಮಕ್ಕಳು ಅರ್ಧದಲ್ಲೇ ಶಾಲೆ ಬಿಟ್ಟಿರುವ ಪ್ರಕರಣಗಳು ಎಷ್ಟು ; ಇದಕ್ಕೆ ಕಾರಣಗಳೇನು ;

(ಇ) ಆರ್.ಟಿ.ಇ. ಜಾರಿಗೆ ಬಂದ ನಂತರ ಶಾಲಾ ಸಮುದಾಯದವರು ಸರ್ಕಾರಿ ಶಾಲೆ ಕಡೆ ಗಮನಹರಿಸುತ್ತಿರುವುದು ಕಡಿಮೆ ಆಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಅಕ್ಷರ ದಾಸೋಹ ನೌಕರರಿಗೆ ಕನಿಷ್ಠ ವೇತನ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೭೪ (೧೯೭೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಕ್ಷರ ದಾಸೋಹ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; (ಜಿಲ್ಲಾವಾರು)

(ಆ) ಈ ಸಿಬ್ಬಂದಿಗಳಿಗೆ ನೀಡುತ್ತಿರುವ ಕನಿಷ್ಠ ವೇತನವೆಷ್ಟು ;

(ಇ) ಅಕ್ಷರ ದಾಸೋಹದ ಸಿಬ್ಬಂದಿ ನೇಮಕಾತಿಯಲ್ಲಿ ನಿಯಮಗಳನ್ನು ಅಳವಡಿಸಿಕೊಳ್ಳಲಾಗಿದೆಯೇ ; ಇವರಿಗೆ ಸೇವಾ ನಿಯಮಾವಳಿ ರೂಪಿಸಲಾಗಿದೆಯೇ ;

ಈ) ಈ ಸಿಬ್ಬಂದಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು ?

## ಈಶಾನ್ಯ ಪದವೀಧರ ಕ್ಷೇತ್ರ ವ್ಯಾಪ್ತಿಯಲ್ಲಿ ಪದವಿ ಕಾಲೇಜುಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೭೫ (೧೯೬೯) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಈಶಾನ್ಯ ಪದವೀಧರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೀದರ, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಕಾಲೇಜುಗಳಲ್ಲಿ ಎಷ್ಟು ಕಾಲೇಜುಗಳು ಸ್ವಂತ ಕಟ್ಟಡ ಹೊಂದಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಟ್ಟಡವಿಲ್ಲದ ಕಾಲೇಜುಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕಾಗಿ ಕೈಗೊಂಡಿರುವ ಕ್ರಮಗಳೇನು ; ಪ್ರಸಕ್ತ ಸಾಲಿನಲ್ಲಿ ಎಷ್ಟು ಕಾಲೇಜು ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ; ಅದಕ್ಕಾಗಿ ಕಾಯ್ದಿರಿಸಿರುವ ಅನುದಾನ ಎಷ್ಟು ; ಇದುವರೆಗೂ ಖರ್ಚಾಗಿರುವ ಹಣ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 446 ಪ್ರತಿಗಳು 1500